**<u>ಕರ್ನಾಟಕ ಸರ್ಕಾರ</u>**

**<u>ಸಮಾಜ ಕಲ್ಯಾಣ ಇಲಾಖೆ</u>**

ಸಂಖ್ಯೆ:ಸಕಇ/ಪಪೂತಕೇ/ಎಸ್-4/ಸಿಆರ್-11/2020-21

ಆಯುಕ್ತರ ಕಛೇರಿ,
ಸಮಾಜ ಕಲ್ಯಾಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು,
ದಿನಾಂಕ:19.12.2020.

**<u>ಅಧಿಸೂಚನೆ</u>**

ವಿಷಯ: 2020-21ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಗೆ ಆನ್ ಲೈನ್/ಆಫ್ ಲೈನ್ ಮೂಲಕ ಯು.ಪಿ.ಎಸ್.ಸಿ/ಕೆ.ಎ.ಎಸ್/ಗ್ರೂಪ್-ಸಿ/ಬ್ಯಾಂಕಿಂಗ್/ಎಸ್.ಎಸ್.ಸಿ ಮತ್ತು ಆರ್.ಆರ್.ಬಿ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

*-*-*-*

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, 2020-21ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳನ್ನು ಆನ್ ಲೈನ್/ಆಫ್ ಲೈನ್ ಮೂಲಕ ಯು.ಪಿ.ಎಸ್.ಸಿ/ಕೆ.ಎ.ಎಸ್/ಗ್ರೂಪ್-ಸಿ/ಬ್ಯಾಂಕಿಂಗ್/ಎಸ್.ಎಸ್.ಸಿ ಮತ್ತು ಆರ್.ಆರ್.ಬಿ ಪರೀಕ್ಷೆಗಳ ಪೂರ್ವಭಾವಿ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಯು.ಪಿ.ಎಸ್.ಸಿ/ಕೆ.ಎ.ಎಸ್/ಗ್ರೂಪ್-ಸಿ/ಬ್ಯಾಂಕಿಂಗ್ / ಎಸ್.ಎಸ್.ಸಿ ಮತ್ತುಆರ್.ಆರ್.ಬಿ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು **ಕೋವಿಡ್-19 ಹಿನ್ನಲೆಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಿ ಆಯ್ಕೆ ಮಾಡಲು ಸಾಧ್ಯವಾಗದ ಕಾರಣ ಪದವಿ ಪರೀಕ್ಷೆಯಲ್ಲಿ ಪಡೆದ ಅಂಕಗಳ ಮೆರಿಟ್ ಆಧಾರದ ಮೇಲೆ ಅಭ್ಯರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡಲಾಗುತ್ತದೆ**. ಆಯ್ಕೆಯಾದ ಅಭ್ಯರ್ಥಿಗಳಿಗೆ ತರಬೇತಿ ಅವಧಿಗೆ ಶಿಷ್ಯವೇತನವನ್ನು ಸರ್ಕಾರದಿಂದ ಮಂಜೂರಾದ ದರದಲ್ಲಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳು ಹಾಜರಾತಿಯನ್ವಯ ವರ್ಗಾಯಿಸಲಾಗುವುದು.

**<u>ಯು.ಪಿ.ಎಸ್.ಸಿ /ಕೆ.ಎ.ಎಸ್ /ಗ್ರೂಪ್-ಸಿ /ಬ್ಯಾಂಕಿಂಗ್ /ಎಸ್.ಎಸ್.ಸಿ ಮತ್ತು ಆರ್.ಆರ್.ಬಿ ಪರೀಕ್ಷೆಗಳ ಪೂರ್ವಭಾವಿ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.</u>**

| ಕ್ರ.ಸಂ | ವಿವರ | | | | | | |
|---|---|---|---|---|---|---|---|
| 01 | ಕೋರ್ಸ್‌ನ ವಿವರ | ಯು.ಪಿ.ಎಸ್.ಸಿ/ಕೆ.ಎ.ಎಸ್/ಬ್ಯಾಂಕಿಂಗ್/ಗ್ರೂಪ್-ಸಿ/ಎಸ್.ಎಸ್.ಸಿ ಮತ್ತು ಆರ್.ಆರ್.ಬಿ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವಭಾವಿ ತರಬೇತಿ | | | | | |
| 02 | ತರಬೇತಿ ಅವಧಿ (ತಿಂಗಳು) | ಯು.ಪಿ.ಎಸ್.ಸಿ | ಕೆ.ಎ.ಎಸ್ | ಗ್ರೂಪ್-ಸಿ | ಬ್ಯಾಂಕಿಂಗ್ | ಎಸ್.ಎಸ್.ಸಿ | ಆರ್.ಆರ್.ಬಿ |
| | | 5 ತಿಂಗಳು | 4 ತಿಂಗಳು | 3 ತಿಂಗಳು | 3 ತಿಂಗಳು | 3 ತಿಂಗಳು | 3 ತಿಂಗಳು |

<table>
<tr><td>03</td><td>ವಯಸ್ಸು</td><td>18 ರಿಂದ 40 ವರ್ಷ</td></tr>
<tr><td>04</td><td>ವಿದ್ಯಾರ್ಹತೆ</td><td>ಯು.ಪಿ.ಎಸ್.ಸಿ:-<br>ಅಭ್ಯರ್ಥಿಯು ಪದವಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಶೇ.55 ಕ್ಕಿಂತ ಹೆಚ್ಚು ಅಂಕಗಳಸಿದವರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>ಕೆ.ಎ.ಎಸ್/ಗ್ರೂಪ್-ಸಿ/ಬ್ಯಾಂಕಿಂಗ್/ಆರ್‌ಆರ್‌ಬಿ/ಎಸ್‌ಎಸ್‌ಸಿ:-<br>ಅಭ್ಯರ್ಥಿಯು ಪದವಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಶೇ.50 ಕ್ಕಿಂತ ಹೆಚ್ಚು ಅಂಕಗಳಸಿದವರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.</td></tr>
<tr><td>05</td><td>ಅಭ್ಯರ್ಥಿಯ ಸಾಮಾನ್ಯ ಅರ್ಹತೆ</td><td>1.ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರತಕ್ಕದ್ದು.<br>2.ಕರ್ನಾಟಕ ರಾಜ್ಯದ ಅನುಸೂಚಿತ ಜಾತಿ ಮತ್ತು ಅನುಸೂಚಿತ ವರ್ಗಕ್ಕೆ ಸೇರಿದ ಜಾತಿ ಪಟ್ಟಿಯಲ್ಲಿರುವ ಜಾತಿಗೆ ಸೇರಿರತಕ್ಕದ್ದು.<br>3. ಕುಟುಂದ ವಾರ್ಷಿಕ ಆದಾಯ: ರೂ. 5.00 ಲಕ್ಷಗಳ ಒಳಗಿರತಕ್ಕದ್ದು.<br>4.ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>5.ಅಭ್ಯರ್ಥಿಯು ಕನಿಷ್ಠ 18 ರಿಂದ 40 ವರ್ಷದೊಳಗಿರತಕ್ಕದ್ದು.</td></tr>
<tr><td>06</td><td>ಷರತ್ತು</td><td>ಅಭ್ಯರ್ಥಿಯು ಯು.ಪಿ.ಎಸ್.ಸಿ /ಕೆ.ಎ.ಎಸ್ /ಗ್ರೂಪ್-ಸಿ /ಬ್ಯಾಂಕಿಂಗ್ /ಎಸ್.ಎಸ್.ಸಿ ಮತ್ತು ಆರ್.ಆರ್.ಬಿ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ವಿಧಿಸುವ ಎಲ್ಲಾ ನಿಬಂಧನೆಗಳನ್ನು ಪೂರೈಸತಕ್ಕದ್ದು.</td></tr>
<tr><td>07</td><td>ಸ್ಥಾನ ಹಂಚಿಕೆ</td><td>
<table>
<tr><th>ವಿಷಯ</th><th>ಸ್ಥಾನ ಹಂಚಿಕೆ</th><th>ವಿವರಣೆ</th></tr>
<tr><td>ಮಹಿಳೆ</td><td>ಶೇ.33</td><td>ನಿಗದಿತ ಸಂಖ್ಯೆಯಲ್ಲಿ ಮಹಿಳಾ ಅಭ್ಯರ್ಥಿ ದೊರೆಯದಿದ್ದರೆ, ಇತರೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗುತ್ತದೆ.</td></tr>
<tr><td>ಅಂಗವಿಕಲರು</td><td>ಶೇ.04</td><td>ಅಂಗವಿಕಲ ಅಭ್ಯರ್ಥಿಗಳು ನಿಗದಿತ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಅಂಗವಿಕಲ ಪ್ರಮಾಣ ಪತ್ರ ಹೊಂದಿರಬೇಕು.</td></tr>
<tr><td>ವಿದ್ಯಾರ್ಥಿ ನಿಲಯದ ಅಭ್ಯರ್ಥಿಗಳು</td><td>ಶೇ.10</td><td>ಕೇಂದ್ರ ಹಾಗೂ ರಾಜ್ಯ ಸರ್ಕಾರ ನಡೆಸುವ ವಿದ್ಯಾರ್ಥಿ ನಿಲಯದಲ್ಲಿ ಕನಿಷ್ಠ 3 ವರ್ಷ ಅಧ್ಯಯನ ಮಾಡಿದ ಅಭ್ಯರ್ಥಿಗಳು ಸಂಬಂಧಪಟ್ಟ ನಿಲಯ ಮೇಲ್ವಿಚಾರಕರಿಂದ ಅಧ್ಯಯನದ ಪ್ರಮಾಣ ಪತ್ರವನ್ನು ಪಡೆದಿರಬೇಕು.</td></tr>
<tr><td>ವಸತಿ ಶಾಲೆ ವಿದ್ಯಾರ್ಥಿಗಳು</td><td>ಶೇ.10</td><td>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಯಲ್ಲಿ ಕನಿಷ್ಠ 5 ವರ್ಷ ಅಧ್ಯಯನ ಮಾಡಿದ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಂಶುಪಾಲರಿಂದ ಅಧ್ಯಯನ ಪ್ರಮಾಣ ಪತ್ರವನ್ನು ಪಡೆದಿರಬೇಕು.</td></tr>
<tr><td>ಸೂಕ್ಷ್ಮ-ಅತೀ ಸೂಕ್ಷ್ಮ ಹಾಗೂ ಸಫಾಯಿ ಕರ್ಮಾಚಾರಿ ವಿದ್ಯಾರ್ಥಿಗಳು</td><td>ಶೇ.05</td><td>ಕರ್ನಾಟಕ ಸರ್ಕಾರದ ಸೂಕ್ಷ್ಮ-ಅತೀ ಸೂಕ್ಷ್ಮ ಘೋಷಿತ ಅಭ್ಯರ್ಥಿಗಳು ಪ್ರಮಾಣ ಪತ್ರವನ್ನು ಹೊಂದಿರಬೇಕು. ಸಫಾಯಿ ಕರ್ಮಾಚಾರಿ ಅಭ್ಯರ್ಥಿಗಳು ನಗರಾಭಿವೃದ್ಧಿ ಇಲಾಖೆ/ ಪಂಚಾಯತ್ ರಾಜ್ ಇಲಾಖೆ ನೀಡುವ ಪ್ರಮಾಣ ಪತ್ರವನ್ನು ಹೊಂದಿರಬೇಕು.</td></tr>
</table>
</td></tr>
<tr><td>08</td><td>ಆಯ್ಕೆ ವಿಧಾನ</td><td>ಅಭ್ಯರ್ಥಿಯು ಪದವಿ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ವಯ ಮೆರಿಟ್ ಹಾಗೂ ರೋಸ್ಟರ್ ಆಧಾರದ ಮೇಲೆ ಅಭ್ಯರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡಲಾಗುವುದು.</td></tr>
<tr><td>09</td><td>ಅರ್ಜಿ ಸಲ್ಲಿಸಲು ವೆಬ್‌ಸೈಟ್ ವಿಳಾಸ</td><td>www.sw.kar.nic.in</td></tr>
</table>

| | | |
|---|---|---|
| 10 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **31/12/2020ರ ಸಂಜೆ 5.30 ರವರೆಗೆ** |

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

**ಸೂಚನೆ:**

ಆಯ್ಕೆಯಾದ ಅಭ್ಯರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಖಾಸಗಿ ತರಬೇತಿ ಸಂಸ್ಥೆಗಳಿಂದ ಉಚಿತವಾಗಿ ತರಬೇತಿಯನ್ನು ನೀಡಲಾಗುವುದು ಹಾಗೂ ತರಬೇತಿ ಅವಧಿಯಲ್ಲಿ ಯಾವುದೇ ವಸತಿ ಸೌಲಭ್ಯವನ್ನು ಇಲಾಖಾವತಿಯಿಂದ ನೀಡಲಾಗುವುದಿಲ್ಲ. ಸರ್ಕಾರದ ಆದೇಶದ ಪ್ರಕಾರ ಮಾಸಿಕ ಶಿಷ್ಯವೇತನವನ್ನು ಹಾಜರಾತಿಯನ್ವಯ ಪಾವತಿಸಲಾಗುವುದು.

ಯು.ಪಿ.ಎಸ್.ಸಿ/ ಕೆ.ಎ.ಎಸ್. ಸ್ಪರ್ಧಾತ್ಮಕ ಪರೀಕ್ಷೆಗೆ ಈಗಾಗಲೇ ತರಬೇತಿ ಪಡೆದ ಅಭ್ಯರ್ಥಿ ಪುನಃ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಆದರೆ ಎಸ್.ಎಸ್.ಸಿ./ಆರ್.ಆರ್.ಬಿ/ಬ್ಯಾಂಕಿಂಗ್/ಗ್ರೂಪ್-ಸಿ ಮತ್ತು ಎನ್.ಡಿ.ಎ. ಪ್ರವೇಶ ಪರೀಕ್ಷೆಗೆ ತರಬೇತಿ ಪಡೆದ ಅಭ್ಯರ್ಥಿಗಳು ಯು.ಪಿ.ಎಸ್.ಸಿ/ ಕೆ.ಎ.ಎಸ್. ತರಬೇತಿಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರು. ಈಗಾಗಲೇ ಎಸ್.ಎಸ್.ಸಿ/ ಆರ್.ಆರ್.ಬಿ/ ಬ್ಯಾಂಕಿಂಗ್/ ಗ್ರೂಪ್-ಸಿ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಪಡೆದ ಅಭ್ಯರ್ಥಿಗಳು ಪುನಃ ಗ್ರೂಪ್-ಸಿ/ ಆರ್.ಆರ್.ಬಿ/ ಎಸ್.ಎಸ್.ಸಿ/ ಬ್ಯಾಂಕಿಂಗ್ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಕೋವಿಡ್-19 ಹಿನ್ನಲೆಯಲ್ಲಿ 2020-21 ನೇ ಸಾಲಿನ ತರಬೇತಿಯನ್ನು ಆನ್-ಲೈನ್ ಮೂಲಕ ನೀಡಲಾಗುತ್ತದೆ. ರಾಜ್ಯ ಸರ್ಕಾರ ಆಫ್-ಲೈನ್ (ಆನ್‌ಬೋರ್ಡ್ ತರಬೇತಿ)ಗೆ ಅವಕಾಶ ನೀಡಿದ ನಂತರ ಆಫ್-ಲೈನ್ ತರಬೇತಿಯನ್ನು ನೀಡಲಾಗುತ್ತದೆ. ತರಬೇತಿಗೆ ಅರ್ಹತೆ ಪಡೆದ ಅಭ್ಯರ್ಥಿಗಳು ಸರ್ಕಾರದ ನಿರ್ಧಾರದಂತೆ ಆಫ್-ಲೈನ್ ಅಥವಾ ಆನ್-ಲೈನ್ ತರಬೇತಿಯನ್ನು ಪಡೆಯಬೇಕು. ಅಭ್ಯರ್ಥಿಯು ತರಬೇತಿಗೆ ಹಾಜರಾದ ದಿನಗಳ ಹಾಜರಾತಿಯ ಮೇಲೆ ಶಿಷ್ಯವೇತನ ಪಾವತಿಸಲಾಗುತ್ತದೆ.

ಸಹಿ/-
ಮುಖ್ಯ ಆಡಳಿತಾಧಿಕಾರಿಗಳು,
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಬೆಂಗಳೂರು.